# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ – ೪ಎ | ಬೆಂಗಳೂರು, ಶುಕ್ರವಾರ, ೨೮, ಮಾರ್ಚ್, ೨೦೨೫(ಚೈತ್ರ, ೦೭, ಶಕವರ್ಷ, ೧೯೪೭) | ನಂ. ೨೦೫ |
| Part – IVA | BENGALURU, FRIDAY, 28, MARCH, 2025( CHAITHRA, 07, SHAKAVARSHA, 1947) | No. 205 |


## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 11 ಶಾಸನ 2025, ದಿನಾಂಕ: 28.03.2025**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2025 ಇದಕ್ಕೆ 2025 ರ ಮಾರ್ಚ್ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ:22 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IVA) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 22**

(2025ರ ಮಾರ್ಚ್ ತಿಂಗಳ 28 ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2025

(2025ರ ಮಾರ್ಚ್ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 (2016 ರ ಕರ್ನಾಟಕ ಅಧಿನಿಯಮ ಸಂಖ್ಯೆ:16) ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. ಪದಾವಳಿಯ ಪ್ರತಿಯೋಜನೆ.-** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 (2016ರ ಕರ್ನಾಟಕ ಅಧಿನಿಯಮ ಸಂಖ್ಯೆ :16) ರಲ್ಲಿ "ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ" ಎಂಬ ಪದಗಳು ಬರುವ ಕಡೆಗಳಲ್ಲೆಲ್ಲಾ "ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

# PARLIAMENTARY AFFAIRS AND LEGISLATION SECRETARIAT

## NOTIFICATION

**NO. DPAL 11 SHASANA 2025, BENGALURU, DATED: 28.03.2025**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2025 (2025 ರ ಕರ್ನಾಟಕ ಅಧಿನಿಯಮ ಸಂಖ್ಯೆ:22) ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.-

## KARNATAKA ACT NO.22 OF 2025

(First Published in the Karnataka Gazette Extra-ordinary on the 28th day of March 2025)

### THE KARNATAKA STATE RURAL DEVELOPMENT AND PANCHAYAT RAJ UNIVERSITY (AMENDMENT) ACT, 2025

(Received the assent of the Governor on the 27th day of March 2025)

An Act further to amend the Karnataka State Rural Development and Panchayat Raj University Act, 2016.

Whereas, it is expedient further to amend the Karnataka State Rural Development and Panchayat Raj University Act, 2016 (Karnataka Act 16 of 2016) for the purposes hereinafter appearing;

Be it enacted by the Karnataka State Legislature in the Seventy sixth year of the Republic of India, as follows:-

**1. Short title and commencement.-** (1) This Act may be called the Karnataka State Rural Development and Panchayat Raj University (Amendment) Act, 2025.

(2) It shall come into force at once.

**2. Substitution of expression.-** In the Karnataka State Rural Development and Panchayat Raj University Act, 2016 (Karnataka Act 16 of 2016) for the words, “the Karnataka State Rural Development and Panchayat Raj University”, wherever they occur, the words “the Mahatma Gandhi Rural Development and Panchayat Raj University”, shall be substituted.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



The above translation of ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 22) Be published in the official Gazette under clause (3) of Article 348 of the constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
The Governor of Karnataka,

**G. SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ-IVA<br>Part-IVA | ಬೆಂಗಳೂರು, ಬುಧವಾರ, ಜುಲೈ ೧೨, ೨೦೧೭ (ಆಷಾಢ ೨೧, ಶಕ ವರ್ಷ ೧೯೩೯)<br>Bengaluru, Wednesday, July 12, 2017 (Ashada 21, Shaka Varsha 1939) | ನಂ. ೬೭೬<br>No. 676 |
|---|---|---|

## ಸಂಸದೀಯ ವ್ಯವಹಾರಗಳ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 39 ಶಾಸನ 2017, ಬೆಂಗಳೂರು, ದಿನಾಂಕ: 12.07.2017**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2017ಕ್ಕೆ 2017ರ ಜುಲೈ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 36 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 36**

(2017ರ ಜುಲೈ ತಿಂಗಳ ಹನ್ನೆರಡನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2017**

(2017ರ ಜುಲೈ ತಿಂಗಳ ಹನ್ನೊಂದನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ನ್ನು (2016ರ ಕರ್ನಾಟಕ ಅಧಿನಿಯಮ 16) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 15ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ರ (2016ರ ಕರ್ನಾಟಕ ಅಧಿನಿಯಮ 16) (ಇಲ್ಲಿ ಇನ್ನುಮುಂದೆ ಮೂಲ

ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 15ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ "ಅರವತ್ತೈದು" ಎಂಬ ಪದಕ್ಕೆ "ಅರವತ್ತೇಳು" ಎಂಬ ಪದವನ್ನು ಪ್ರತಿಯೋಜಿಸತಕ್ಕದ್ದು ಮತ್ತು ಹಾಗೆ ಯಾವಾಗಲೂ ಪ್ರತಿಯೋಜಿಸಲಾಗಿದೆ ಎಂದು ಭಾವಿಸತಕ್ಕದ್ದು.

3. 17ನೇ ಪ್ರಕರಣದ ತಿದ್ದುಪಡಿ.- ಮೂಲ ಅಧಿನಿಯಮದ 17ನೇ ಪ್ರಕರಣದಲ್ಲಿ,-

(ಎ) (1)ನೇ ಉಪಪ್ರಕರಣದ ಪರಂತುಕದಲ್ಲಿ "ವಿಶ್ವವಿದ್ಯಾಲಯದಲ್ಲಿ ಇರುವಂಥ" ಎಂಬ ಪದಗಳ ತರುವಾಯ "ಪ್ರಾಧ್ಯಾಪಕರಾಗಿರುವ ಸಂದರ್ಭದಲ್ಲಿ ರಿಜಿಸ್ಟ್ರಾರ್‌ರವರನ್ನು ಅಥವಾ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) (2)ನೇ ಉಪಪ್ರಕರಣದಲ್ಲಿ "ವಿಶ್ವವಿದ್ಯಾಲಯದಲ್ಲಿಯ" ಎಂಬ ಪದದ ತರುವಾಯ "ಪ್ರಾಧ್ಯಾಪಕರಾಗಿರುವ ಸಂದರ್ಭದಲ್ಲಿ ರಿಜಿಸ್ಟ್ರಾರ್‌ರವರನ್ನು ಅಥವಾ" ಎಂಬ ಪದಗಳನ್ನು ಸೇರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ. ದ್ವಾರಕನಾಥ್ ಬಾಬು
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಕಿ7) ಪ್ರತಿಗಳು: ೫೦೦